ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/198/ಪ್ರವೇಶ-ಹೆ/2017-18

ಕಾಲೇಜು ಶಿಕ್ಷಣ ಆಯುಕ್ತರ ಕಚೇರಿ
ಶೇಷಾದ್ರಿ ರಸ್ತೆ, ಬೆಂಗಳೂರು
ದಿನಾಂಕ: 03-02-2018

## ಸುತ್ತೋಲೆ

ವಿಷಯ: ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಹೆಚ್ಚಿಸಲು ದಾಖಲಾತಿ ಆಂದೋಲನ ಕೈಗೊಳ್ಳುವ ಬಗ್ಗೆ.

****

ಪದವಿ ಪೂರ್ವ ಶಿಕ್ಷಣ ಇಲಾಖೆಯ ದ್ವಿತೀಯ ಪಿಯುಸಿ ತರಗತಿಗಳ ಫಲಿತಾಂಶವು ಮೇ ಮೊದಲ ವಾರದಲ್ಲಿ ಪ್ರಕಟವಾಗಲಿದ್ದು, ದ್ವಿತೀಯ ಪಿಯುಸಿ ತರಗತಿಯನ್ನು ಮುಗಿಸಿದ ಎಲ್ಲಾ ವಿದ್ಯಾರ್ಥಿ/ವಿದ್ಯಾರ್ಥಿನಿಯರು ತಮ್ಮ ಮುಂದಿನ ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಸದೆ ಮುಂದುವರೆಸುವಂತೆ ಕ್ರಮವಹಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿರುತ್ತದೆ ಈ ಹಿನ್ನೆಲೆಯಲ್ಲಿ ಯಾವುದೇ ವಿದ್ಯಾರ್ಥಿಯು ಉನ್ನತ ಶಿಕ್ಷಣದಿಂದ ವಂಚಿತರಾಗುವುದನ್ನು ತಡೆದು, ಅವರನ್ನು ಮುಂದಿನ ಶೈಕ್ಷಣಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಪ್ರೋತ್ಸಾಹಿಸಿ ಆ ಮೂಲಕ ಯುವಜನರನ್ನು ಸಮಾಜಮುಖಿಯನ್ನಾಗಿಸಲು ಸಂಬಂಧಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಈ ಕೆಳಗಿನ ಕ್ರಮಗಳನ್ನು ವಹಿಸಲು ಸೂಚಿಸಿದೆ.

1) ರಾಜ್ಯದ ಪ್ರತಿ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜಿನ ಪ್ರಾಚಾರ್ಯರು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿಯುಸಿಯಲ್ಲಿ ಉತ್ತೀರ್ಣರಾಗುವ ವಿದ್ಯಾರ್ಥಿಗಳ ಮಾಹಿತಿಯನ್ನು ವಿದ್ಯಾರ್ಥಿವಾರು ಸಂಗ್ರಹಿಸಿ ಇಟ್ಟುಕೊಳ್ಳುವುದು.
2) ಮಾಹಿತಿಯನ್ನು ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರು ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜುಗಳ ಪ್ರಾಚಾರ್ಯರಿಗೆ ನೀಡಿ ವಿದ್ಯಾರ್ಥಿಗಳ ದಾಖಲಾತಿಗೆ ಸಹಕರಿಸುವುದು.
3) ಸಂಗ್ರಹಿಸಿದ ಮಾಹಿತಿಯ ಆಧಾರದ ಮೇಲೆ ಪದವಿ ಕಾಲೇಜಿನ ಪ್ರಾಚಾರ್ಯರು ವಿದ್ಯಾರ್ಥಿಯ ಪೋಷಕರನ್ನು ಸಂಪರ್ಕಿಸಿ, ವಿದ್ಯಾರ್ಥಿಯು ತಮ್ಮ ಪ್ರಥಮ ದರ್ಜೆ ಕಾಲೇಜಿಗೆ ದಾಖಲಾಗಿ ಉನ್ನತ ಶಿಕ್ಷಣವನ್ನು ಪಡೆಯುವಂತೆ ಪ್ರೋತ್ಸಾಹಿಸುವುದು.
4) ಮಾಹಿತಿಯನ್ನು ವಿದ್ಯಾರ್ಥಿಗಳ ಪೋಷಕರಿಗೆ ತಲುಪಿಸಲು ವಿವಿಧ ಮಾಧ್ಯಮಗಳನ್ನು ಬಳಕೆ ಮಾಡುವುದು. ಕಾಲೇಜಿನಲ್ಲಿರುವ ಸಂಪನ್ಮೂಲ, ಸೌಲಭ್ಯ, ಸರ್ಕಾರದ ಯೋಜನೆಗಳು ಇತ್ಯಾದಿಗಳನ್ನು ಬಿಂಬಿಸುವಂತೆ ಆಕರ್ಷಣೀಯವಾದ ಕರಪತ್ರ, ದೂರವಾಣಿ ಸಂದೇಶ/ವಾಟ್ಸಾಪ್ ಸಂದೇಶ / ಫೇಸ್ ಬುಕ್ ಮೂಲಕ ಮುಂತಾದ ಅಂದರೆ ಸಾಮಾಜಿಕ ಜಾಲತಾಣಗಳ ಮೂಲಕ ಅಭಿಯಾನವನ್ನು ಕೈಗೊಳ್ಳುವುದು ಇದಕ್ಕಾಗಿ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜಿನ ಸಂಚಿತ ನಿಧಿಯಲ್ಲಿರುವ ಅನುದಾನದಲ್ಲಿ ರೂ.5,000/- ಮೊತ್ತಕ್ಕೆ ಮೀರದಂತೆ ವೆಚ್ಚವನ್ನು ಭರಿಸಬಹುದು.
5) ಫೆಬ್ರವರಿ 3/4ನೇ ವಾರದಲ್ಲಿ ದಾಖಲಾತಿ ಆಂದೋಲನದ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಕ್ರಮ ಕೈಗೊಳ್ಳುವುದು.
6) ಸ್ಥಳೀಯ ಕೇಬಲ್ ಟಿ.ವಿ.ಗಳಲ್ಲಿ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜುಗಳಲ್ಲಿರುವ ಸೌಲಭ್ಯ, ಕಾಲೇಜಿನಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳ ವಿವರವನ್ನು ಬಿತ್ತರಿಸುವ ಮೂಲಕ ಪೋಷಕರು ತಮ್ಮ ಮಕ್ಕಳನ್ನು ಉನ್ನತ ಶಿಕ್ಷಣ ಪಡೆಯಲು ಪ್ರೋತ್ಸಾಹಿಸುವಂತೆ ಮಾಡುವುದು.

7) ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳನ್ನು ದಾಖಲಿಸಲು ಸಿದ್ಧಪಡಿಸುವ ಕರಪತ್ರ/ಜಾಹೀರಾತಿಗಾಗಿ ಈ ಕೆಳಗಿನ ಮಾಹಿತಿಗಳನ್ನು ಅಡಕಗೊಳಿಸಬಹುದು.

- ಪ್ರತಿಭಾವಂತ ಹಾಗೂ ಸಮರ್ಥ ಉಪನ್ಯಾಸಕರುಗಳು/ಪ್ರಾಧ್ಯಾಪಕರುಗಳು ಕಾರ್ಯ ನಿರ್ವಹಿಸುತ್ತಿದ್ದಾರೆ.
- ಪ್ರಾಧ್ಯಾಪಕರು/ಉಪನ್ಯಾಸಕರುಗಳು ಕಾಲಕಾಲಕ್ಕೆ ನಡೆಯುವ ತರಬೇತಿ ಹಾಗೂ ವಿಷಯಾಧಾರಿತ ಕಾರ್ಯಾಗಾರಗಳಲ್ಲಿ ಭಾಗವಹಿಸಿರುತ್ತಾರೆ.
- ಕಾಲೇಜುಗಳು ಉತ್ತಮ ಪ್ರಯೋಗಾಲಯ, ಗ್ರಂಥಾಲಯ, ಗಣಕಯಂತ್ರಗಳ ಸೌಲಭ್ಯ, ಸುಸಜ್ಜಿತ ಕಾಲೇಜು ಕಟ್ಟಡ, ತರಗತಿ/ಪ್ರಯೋಗಾ ಕೊಠಡಿಗಳು, ಆಟದ ಮೈದಾನ, ಕುಡಿಯುವ ನೀರಿನ ಸೌಲಭ್ಯ, ಭದ್ರತೆ, ಶೌಚಾಲಯ ವ್ಯವಸ್ಥೆ ಮುಂತಾದ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಬಗ್ಗೆ ಪ್ರಚುರಪಡಿಸುವುದು.
- ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಸ್ಪರ್ಧಾತ್ಮಕ ಚಟುವಟಿಕೆಗಳು ಬಗ್ಗೆ ಹಾಗೂ ಅದರಲ್ಲಿ ಭಾಗವಹಿಸಿ, ವಿಜೇತರಾದ ವಿದ್ಯಾರ್ಥಿಗಳ ಸಾಧನೆಗಳ ಬಗ್ಗೆ ಬಿತ್ತರಿಸುವುದು.
- ವಿದ್ಯಾರ್ಥಿಗಳನ್ನು ಕೌಶಲಭರಿತರನ್ನಾಗಿಸಲು ಹಾಗೂ ಅವರ ಸರ್ವತೋಮುಖ ಅಭಿವೃದ್ಧಿಗೆ ಅವಶ್ಯಕವಾದಂತಹ ಸಂವಹನ ಕಾರ್ಯಕ್ರಮಗಳು ಮತ್ತು ವ್ಯಕ್ತಿತ್ವ ವಿಕಸನಕ್ಕೆ ಸಂಬಂಧಿಸಿದ ಚಟುವಟಿಕೆಗಳನ್ನು ಕೈಗೊಳ್ಳಲಾಗುವುದು.

8) ಕಾಲೇಜು ಬಿಟ್ಟ ವಿದ್ಯಾರ್ಥಿಗಳ/ನೂತನವಾಗಿ ದಾಖಲಾಗುವ ವಿದ್ಯಾರ್ಥಿಗಳ ಪೋಷಕರ ಮನೆಮನೆ ಭೇಟಿ ಕೈಗೊಳ್ಳುವುದು ಹಾಗೂ ಉಪನ್ಯಾಸಕರಿಗೆ ವಿದ್ಯಾರ್ಥಿಗಳನ್ನು ದತ್ತು ನೀಡುವ ಮೂಲಕ ವಿದ್ಯಾರ್ಥಿಗಳ ದಾಖಲಾತಿ, ಹಾಜರಾತಿ ಹಾಗೂ ಗುಣಮಟ್ಟದ ಕಲಿಕೆಯನ್ನು ಖಾತ್ರಿಪಡಿಸಿಕೊಳ್ಳುವುದು.

9) ದಾಖಲಾತಿ ಆಂದೋಲವನ್ನು ಯಶಸ್ವಿಗೊಳಿಸಲು ಅಗತ್ಯ ಕಾರ್ಯಕ್ರಮವನ್ನು ರೂಪಿಸಲು ಕಾಲೇಜಿನ 'ಕಾಲೇಜು ಅಭಿವೃದ್ಧಿ ಸಮಿತಿ'ಯ ಸಭೆ ಕರೆದು, ಚರ್ಚಿಸಿ ಮುಂದುವರೆಯುವುದು.

10) ಪ್ರತಿ ಜಿಲ್ಲೆಗೆ ಒಬ್ಬ ಉತ್ತಮ ಪ್ರಾಂಶುಪಾಲರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ದಾಖಲಾತಿ ಆಂದೋಲನವು ಯಶಸ್ವಿಯಾಗುವಂತೆ ಕ್ರಮವಹಿಸುವುದು.

11) ದಾಖಲಾತಿ ಆಂದೋಲನ ಪರಿಣಾಮವಾಗಿ ಕಳೆದ ಶೈಕ್ಷಣಿಕ ಸಾಲಿಗಿಂತ ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಆದ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಳದ ಕುರಿತು ವರದಿ ತಯಾರಿಸುವುದು. ಉತ್ತಮ ಪ್ರಕರಣಗಳನ್ನು ಪ್ರೋತ್ಸಾಹಿಸುವುದು ಮತ್ತು ಇಂತಹ ಸಾಧನೆ ಮಾಡಿದ ಪ್ರಾಂಶುಪಾಲರು/ಪ್ರಾಧ್ಯಾಪಕರು/ಉಪನ್ಯಾಸಕರುಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಯಲ್ಲಿ ಷರಾ ದಾಖಲಿಸುವುದು.

12) ಕಾಲೇಜುಗಳ ಪ್ರಾಂಶುಪಾಲರು ಸಿದ್ಧಪಡಿಸಿದ ಉತ್ತಮ ಕರಪತ್ರ, ವಿಡಿಯೋ ದಾಖಲೀಕರಣ ಇತ್ಯಾದಿ ಪ್ರಯತ್ನಗಳನ್ನು ಇಲಾಖಾ ಅಧಿಕಾರಿಗಳು ಇತರೆ ಕಾಲೇಜುಗಳ ಪ್ರಾಂಶುಪಾಲರಿಗೆ ಹಾಗೂ ಈ ಕಛೇರಿಯ ಗಮನಕ್ಕೆ ತರುವುದು.

13) 2018-19ನೇ ಶೈಕ್ಷಣಿಕ ಸಾಲಿನಲ್ಲಿ ಜಿಲ್ಲೆಗೆ ಅಧಿಕ ಸಾಧನೆ ಮಾಡಿದ ಎರಡು ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜುಗಳ ಪ್ರಾಂಶುಪಾಲರು/ಪ್ರಾಧ್ಯಾಪಕರು/ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ವಿವರಗಳನ್ನು ಸಂಗ್ರಹಿಸುವುದು. ಅದೇ ರೀತಿ ಕ್ರೀಡೆ, ಬರವಣಿಗೆ, ಸಾಹಿತ್ಯ, ಸಮಾಜ ಸೇವೆಗಳಲ್ಲಿ ಉತ್ತಮ ಸಾಧನೆಗೈದ ಪ್ರಾಧ್ಯಾಪಕರು/ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ವಿವರಗಳನ್ನು ಪಡೆಯುವುದು. ಈ ರೀತಿ ಪಡೆದ ಮಾಹಿತಿಯನ್ನು ಸೂಕ್ತ ಭಾವಚಿತ್ರಗಳ ಸಮೇತ ವರದಿ ಕಳುಹಿಸುವುದು ಇ-ಆಡಳಿತ ವಿಭಾಗವು ಪರಿಶೀಲಿಸಿ ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸುವುದು.

ವೆಬ್ ಸೈಟ್ www.dce.kar.nic.in

14) 2018-19ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜುಗಳಲ್ಲಿ ಅಧ್ಯಯನ ಮಾಡುತ್ತಿರುವ ಅಂತಿಮ ಪದವಿ ವಿದ್ಯಾರ್ಥಿಗಳಲ್ಲಿ ಪ್ರತಿ ವಿಭಾಗಗಳಲ್ಲಿ (ಕಲಾ, ವಾಣಿಜ್ಯ ಹಾಗೂ ವಿಜ್ಞಾನ) ಜಿಲ್ಲೆಗೆ ಅಧಿಕ ಸಾಧನೆ ಮಾಡಿದ ತಲಾ ಇಬ್ಬರು ವಿದ್ಯಾರ್ಥಿ/ವಿದ್ಯಾರ್ಥಿನಿಯರ ಭಾವಚಿತ್ರಗಳನ್ನು ಅವರು ಗಳಿಸಿದ ಅಂಕಗಳೊಂದಿಗಿನ ವಿವರಗಳನ್ನು ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸುವುದು.

15) ಸದರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಪದವಿ ಪೂರ್ವ ಶಿಕ್ಷಣದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಹಾಗೂ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರು ಮತ್ತು ಸಿಬ್ಬಂದಿ ಸಂಪೂರ್ಣ ಸಹಕಾರ ನೀಡಲು ತಿಳಿಸಿದೆ.

ಮೇಲೆ ಸೂಚಿಸಿರುವ ದಾಖಲಾತಿ ಆಂದೋಲನವು ಫೆಬ್ರವರಿ ಮೂರನೇ ವಾರದಿಂದ ಜಾರಿಯಲ್ಲಿರುತ್ತದೆ. ಪ್ರಯುಕ್ತ ಇಲಾಖೆಯ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಸಕ್ರಿಯವಾಗಿ ಭಾಗಿಯಾಗಲು ತಿಳಿಸಿದೆ.

3/2/18

**ನಿರ್ದೇಶಕರು**
**ಪದವಿ ಪೂರ್ವ ಶಿಕ್ಷಣ ಇಲಾಖೆ**

**ಆಯುಕ್ತರು**
**ಕಾಲೇಜು ಶಿಕ್ಷಣ ಇಲಾಖೆ**

ಇವರಿಗೆ:

1) ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜುಗಳ ಪ್ರಾಚಾರ್ಯರಿಗೆ – ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
2) ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ.
3) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಜಿಲ್ಲಾ ಉಪ ನಿರ್ದೇಶಕರ ಮೂಲಕ – ಮುಂದಿನ ಕ್ರಮಕ್ಕಾಗಿ.
4) ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು. ಇವರಿಗೆ ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
5) ಕಛೇರಿ ಪ್ರತಿ.